**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**10.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ಬೆಂಗಳೂರಿನ ವಾಯುಪಡೆ ತರಬೇತಿ ಕೇಂದ್ರದಲ್ಲಿ ವಿಚಾರ ಸಂಕಿರಣ ; ಬಹು ಕ್ಷೇತ್ರ ಸಂಘರ್ಷಕ್ಕೆ ರಕ್ಷಣಾ ಪಡೆ ಸಜ್ಜುಗೊಳಿಸುವ ಮಾರ್ಗಸೂಚಿ ನಿರೂಪಣೆಗೆ ಮುಂದುವರೆದ ಚರ್ಚೆ
2. ಹಾವೇರಿ ಜಿಲ್ಲೆಯಲ್ಲಿ ೭೨ ರೈತ ಆತ್ಮಹತ್ಯೆ ಪ್ರಕರಣ ವಿಲೇವಾರಿ - ಸಚಿವ ಶಿವಾನಂದ ಪಾಟೀಲ್
3. ಮಾಣಿಕ್ಯಧಾರಾ ಜಲಪಾತದ ಬಳಿ ಕಣ್ಮರೆಯಾಗಿದ್ದ ಕೇರಳಂ ಮೂಲದ ಬಾಲಕಿ ದೇಹ ಪ್ರಪಾತದಲ್ಲಿ ಪತ್ತೆ
4. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಯಲ್ ಚಾಲೆಂಜರ್ಸ್ ಬೆಂಗಳೂರು, ರಾಜಸ್ಥಾನ್ ರಾಯಲ್ಸ್ ನಡುವೆ ಗುವಾಹಟಿಯಲ್ಲಿಂದು ಹಣಾಹಣಿ

<><><><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಎರಡು ದಿನಗಳ ರಾಷ್ಟ್ರಮಟ್ಟದ ಮೂರೂ ರಕ್ಷಣಾ ಸೇವೆಗಳ ಕಾರ್ಯತಂತ್ರದ ವಿಚಾರಸಂಕಿರಣ ರಣ್ ಸಂವಾದ್-೨೦೨೬ರ ಎರಡನೇ ದಿನವಾದ ಇಂದು ಮಲ್ಟಿ ಡೊಮೇನ್ ಆಪರೇಷನ್ಸ್ - ಎಂಡಿಒ ಅಂದರೆ ವಿವಿಧ ಆಯಾಮಗಳ ಕಾರ್ಯಾಚರಣೆಗಳ ಕುರಿತು ಚರ್ಚೆಗಳು ಮುಂದುವರೆದಿವೆ. ಆಧುನಿಕ ಯುದ್ಧ ತಂತ್ರದ ಸ್ವರೂಪ ವೇಗವಾಗಿ ಬದಲಾಗುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಕ್ಷೇತ್ರಗಳ ತಜ್ಞರು ಮತ್ತು ರಕ್ಷಣಾ ಅಧಿಕಾರಿಗಳು ಒಗ್ಗೂಡಿ ಭವಿಷ್ಯದ ಭದ್ರತಾ ಸವಾಲುಗಳನ್ನು ಎದುರಿಸಲು ಸಮಗ್ರ ಕಾರ್ಯತಂತ್ರ ರೂಪಿಸುವ ಬಗ್ಗೆ ವಿಚಾರ ವಿನಿಮಯ ನಡೆಸುತ್ತಿದ್ದಾರೆ. ರಣ್ ಸಂವಾದ್ ವಿಚಾರ ಸಂಕಿರಣ ಹಿನ್ನೆಲೆಯಲ್ಲಿ ಮಾತನಾಡಿರುವ ವಾಯುಪಡೆ ಸಿಬ್ಬಂದಿ ಉಪಮುಖ್ಯಸ್ಥ ನಗೇಶ್ ಕಪೂರ್ ಇಂದು ಸಮಾರೋಪಗೊಳ್ಳಲಿರುವ ಎರಡು ದಿನಗಳ ವಿಚಾರ ಸಂಕಿರಣ, ಭವಿಷ್ಯದ ಸಂಘರ್ಷಗಳನ್ನು ಎದುರಿಸಲು ರಕ್ಷಣಾ ಪಡೆಗಳನ್ನು ಮತ್ತು ದೇಶವನ್ನು ಮತ್ತಷ್ಟು ಸನ್ನದ್ಧಗೊಳಿಸುವ ನಿಟ್ಟಿನಲ್ಲಿ ಕಾರ್ಯಸೂಚಿ ಒದಗಿಸಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ನಗೇಶ್ ಕಪೂರ್ ( ೩೯ ಸೆಕೆಂಡ್‌ಗಳು)**

ಎಂಡಿಒ ಕುರಿತ ವಿಚಾರಗೋಷ್ಠಿಯ ಹಿನ್ನೆಲೆಯಲ್ಲಿ ಮಾತನಾಡಿರುವ ನೈಋತ್ಯ ಏರ್ ಕಮಾಂಡ್‌ನ ಏರ್ ಆಫೀಸರ್ ಕಮಾಂಡಿಂಗ್ ಇನ್ ಚೀಫ್ ತಜಿಂದರ್ ಸಿಂಗ್, ಸಮಕಾಲೀನ ಯುದ್ಧ ತಂತ್ರದ ಸ್ವರೂಪ ಇಂದು ಕೇವಲ ನೆಲ, ಜಲ ಮತ್ತು ವಾಯುಪ್ರದೇಶಕ್ಕೆ ಸೀಮಿತವಾಗದೆ, ಬಾಹ್ಯಾಕಾಶ ಮತ್ತು ಸೈಬರ್‌ನಂತಹ ಕ್ಷೇತ್ರಗಳೊಂದಿಗೆ ಮಾನವನ ವೈಚಾರಿಕ ಆಯಾಮ ವಿಸ್ತರಿಸಿದ ಈ ಹೊಸ ಸವಾಲುಗಳನ್ನು ಎದುರಿಸಲು ಮಲ್ಟಿ ಡೊಮೈನ್ ಆಪರೇಷನ್ ಎಂಬ ಪರಿಕಲ್ಪನೆ ಅನಿವಾರ್ಯ ಎಂದು ತಿಳಿಸಿದ್ದಾರೆ. ಬೆಂಗಳೂರಿನ ವಾಯುಪಡೆ ತರಬೇತಿ ಕೇಂದ್ರದಲ್ಲಿ ನಡೆದಿರುವ ಈ ವಿಚಾರ ಸಂಕಿರಣದಲ್ಲಿ ಭೂಮಿ, ವಾಯು, ಸಾಗರ ಮಾತ್ರವಲ್ಲದೇ ಸೈಬರ್, ಬಾಹ್ಯಾಕಾಶ ಮತ್ತು ಜ್ಞಾನಾರ್ಜನೆಯ ಕ್ಷೇತ್ರಗಳನ್ನು ಒಳಗೊಂಡ ಬಹುಕ್ಷೇತ್ರ ಸಂಘರ್ಷಕ್ಕೆ ಭಾರತದ ರಕ್ಷಣಾ ಪಡೆಗಳನ್ನು ಸಜ್ಜುಗೊಳಿಸಲು ಮಾರ್ಗಸೂಚಿಯನ್ನು ರೂಪಿಸುವ ಕುರಿತು ಚರ್ಚೆ ನಡೆಯುತ್ತಿದೆ.

<><><><>

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಇಂದು ಮೈಸೂರು ಮತ್ತು ನಂಜನಗೂಡಿಗೆ ಭೇಟಿ ನೀಡಿ ವಿವಿಧ ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡರು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಮೈಸೂರಿನಲ್ಲಿ ಇಂದು ನಡೆಯಲಿರುವ 'ದಿಶಾ' ಸಭೆಯಲ್ಲಿ ಪಾಲ್ಗೊಳ್ಳಲು ಆಗಮಿಸಿರುವುದಾಗಿ ತಿಳಿಸಿದರು. ಇದೇ ವೇಳೆ, ಅಪಘಾತಕ್ಕೀಡಾಗಿ ೧೧ ಶಸ್ತ್ರಚಿಕಿತ್ಸೆಗೊಳಗಾದ ನಂಜನಗೂಡಿನ ಮಹಿಳೆಯೊಬ್ಬರ ನೋವಿಗೆ ಸ್ಪಂದಿಸಿದ ಸಚಿವರು, ಆಕೆಯನ್ನು ಖುದ್ದಾಗಿ ಭೇಟಿ ಮಾಡಿ ಸಾಂತ್ವನ ಹೇಳಿದರು.

<><><><>

ಹಾವೇರಿ ಜಿಲ್ಲೆಯಲ್ಲಿ ಕಳೆದ ವರ್ಷ ಸಾಲಬಾಧೆಯಿಂದ ೮೩ ರೈತ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದ್ದು, ೭೨ ಪ್ರಕರಣಗಳ ತನಿಖೆಯನ್ನು ವಿಲೇವಾರಿ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿಂದು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈತರು ಯಾವುದೇ ಕಾರಣಕ್ಕೂ ಆತ್ಮಹತ್ಯೆಗೆ ಮುಂದಾಗಬಾರದು. ರೈತರ ಹಿತರಕ್ಷಣೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದರು. ಹಾವೇರಿ ಜಿಲ್ಲೆಯಲ್ಲಿ ಕಳೆದ ವರ್ಷ ನಕಲಿ ಬಿತ್ತನೆ ಬೀಜ ಮಾರಾಟ ಮಾಡಿದ ಆರೋಪದ ಮೇಲೆ ೧೨ ಪ್ರಕರಣ ದಾಖಲು ಮಾಡಲಾಗಿದೆ. ಪ್ರಸ್ತುತ ಸಾಲಿನಲ್ಲಿ ಜಿಲ್ಲೆಗೆ ೧.೪೧ ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಹಂಚಿಕೆಯಾಗಿದ್ದು, ೫೬ ಸಾವಿರ ೨೦೮ ಮೆಟ್ರಿಕ್ ಟನ್ ದಾಸ್ತಾನು ಮಾಡಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಮಲ್ಲಿಕಾರ್ಜುನ ಸಭೆಗೆ ಮಾಹಿತಿ ನೀಡಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಬೆಟ್ಟದ ಮಾಣಿಕ್ಯಧಾರಾ ಜಲಪಾತದ ಬಳಿ ಕಳೆದ ಮಂಗಳವಾರ ಕಾಣೆಯಾಗಿದ್ದ ಕೇರಳಂ ಮೂಲದ ಬಾಲಕಿ ಶ್ರೀನಂದಾ, ದೇಹ ಇಂದು ಪತ್ತೆಯಾಗಿದೆ. ನಾಪತ್ತೆಯಾದ ಮಾಣಿಕ್ಯಧಾರಾ ಸ್ಥಳದಿಂದ ಕೊಂಚ ದೂರದಲ್ಲಿ ಸುಮಾರು ೧ ಸಾವಿರದ ೫೦೦ ಅಡಿ ಪ್ರಪಾತದ ಕಂದಕದಲ್ಲಿ ಬಾಲಕಿಯ ಶವ ಪತ್ತೆಯಾಗಿದೆ. ಸ್ಥಳಕ್ಕೆ ಚಿಕ್ಕಮಗಳೂರು ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ದಯಾಮ ಸೇರಿದಂತೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶಿಲನೆ ನಡೆಸುತ್ತಿದ್ದಾರೆ. ಬಾಲಕಿಯ ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಹೆಚ್ಚಿನ ತನಿಖೆ ಮುಂದುವರೆದಿದೆ. ಮೃತ ಬಾಲಕಿಯು ಕಳೆದ ೩ ದಿನಗಳ ಹಿಂದೆ ಮಾಣಿಕ್ಯಧಾರಾ ಜಲಪಾತಕ್ಕೆ ಪ್ರವಾಸಕ್ಕೆ ಬಂದಿದ್ದ ವೇಳೆ ಕಾಣೆಯಾಗಿದ್ದಳು. ಅಂದಿನಿಂದ ಸತತವಾಗಿ ಪೊಲೀಸ್ ಅಗ್ನಿಶಾಮಕ ದಳ, ಅರಣ್ಯ ಇಲಾಖೆ ಸಿಬ್ಬಂದಿ ಸೇರಿ ೧೦೦ ಕ್ಕೂ ಹೆಚ್ಚು ಸಿಬ್ಬಂದಿ ಹಗಲು ರಾತ್ರಿ ಕಾರ್ಯಾಚರಣೆ ನಡೆಸಿದ್ದರು.

<><><>

ಚಾಮರಾಜನಗರದ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಮ್ಯೂಲ್ ಖಾತೆ ನೈಜತೆ ಪರಿಶೀಲನಾ ಸಂಬಂಧ ಹಾಜರಾಗಿದ್ದ ಸಮರ್ಪಕ ದಾಖಲಾತಿ ನೀಡಲು ತರ್ಕ ಮಾಡಿ ಅನುಚಿತವಾಗಿ ವರ್ತಿಸಿದ ಯುವಕನಿಗೆ ನಗರದ ಸಿ.ಜೆ.ಎಂ ನ್ಯಾಯಾಲಯವು ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎರಡು ದಿನ ಸಮುದಾಯ ಸೇವೆ ಮಾಡುವಂತೆ ಆದೇಶಿಸಿದೆ.

<><><>

ಹಿರಿಯ ಪತ್ರಕರ್ತ, ರಾಷ್ಟ್ರೋತ್ಥಾನ ಪರಿಷತ್‌ನ ನಿಕಟಪೂರ್ವ ಅಧ್ಯಕ್ಷ ಹಾಗೂ ರಾಷ್ಟ್ರೋತ್ಥಾನ ಸಾಹಿತ್ಯದ ಗೌರವ ಸಂಪಾದಕರಾಗಿದ್ದ ನಾಡೋಜ ಡಾ.ಎಸ್.ಆರ್.ರಾಮಸ್ವಾಮಿ ನಿಧನದ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಶಾಸಕ ಬಿ.ವೈ.ವಿಜಯೇಂದ್ರ, ವಿಧಾನಸಭೆಯಲ್ಲಿನ ವಿರೋಧ ಪಕ್ಷದ ನಾಯುಕ ಆರ್. ಅಶೋಕ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

<><><>

ವಿಜಯಪುರ ಜಿಲ್ಲೆಯಲ್ಲಿ ಸದ್ಯಕ್ಕೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿಲ್ಲ. ಇಂಡಿ ಹಾಗೂ ಚಡಚಣ ಭಾಗದಲ್ಲಿ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಜಯಪುರದಲ್ಲಿ ಇಂದು ನಡೆದ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ನಿರ್ವಹಣೆ ಕುರಿತ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಬೇಸಿಗೆ ಸಂದರ್ಭದಲ್ಲಿ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದ

ಅಧಿಕಾರಿಗಳು ತಾಲೂಕು ಕೇಂದ್ರಗಳಿಗೆ ತಕ್ಷಣ ತೆರಳಿ ಸಭೆ ನಡೆಸಿ ಸಮಸ್ಯೆ ಬಗೆಹರಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಮುಂದಿನ ಇಪ್ಪತ್ತು ದಿನಗಳವರೆಗೆ ನೀರು ಬಿಡುಗಡೆ ಸಂದರ್ಭದಲ್ಲಿ ಸಣ್ಣ ನೀರಾವರಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಲು ಜಿಲ್ಲಾಧಿಕಾರಿಗಳು ಸಮನ್ವಯ ಸಭೆ ನಡೆಸಿ, ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಗೊಳ್ಳದಂತೆ ನೋಡಿಕೊಳ್ಳಬೇಕು ಎಂದರು. ನಾಳೆ ಒಟ್ಟು ೨.೩ ಟಿಎಂಸಿ ನೀರನ್ನು ಕೆರೆಗಳಿಗೆ ಹರಿಸಲಾಗುವುದು ಎಂದು ತಿಳಿಸಿದ ಸಚಿವರು, ನೀರು ಹರಿಸುವ ಸಂದರ್ಭದಲ್ಲಿ ನಿಗಾವಹಿಸಿ ಕೊನೆಯ ಹಂತದವರೆಗೂ ನೀರು ತಲುಪುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

<><><>

ಉತ್ತರಕನ್ನಡ ಜಿಲ್ಲೆಯಲ್ಲಿನ ಪ್ರತಿಯೊಂದು ಜನನ ಮತ್ತು ಮರಣ ಘಟನೆಗಳನ್ನು ಯಾವುದೇ ವಿಳಂಬಕ್ಕೆ ಆಸ್ಪದ ನೀಡದಂತೆ ೨೧ ದಿನಗಳ ಒಳಗೆ ಕಡ್ಡಾಯವಾಗಿ ನೊಂದಣಿ ಮಾಡುವಂತೆ ನೋಂದಣಾಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಸೂಚನೆ ನೀಡಿದ್ದಾರೆ. ಅವರು ಕಾರವಾರದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಜನನ ಮರಣ ನೋಂದಣಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರತಿ ತಿಂಗಳು ತಹಶೀಲ್ದಾರ್‌ಗಳ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಸಮನ್ವಯ ಸಮಿತಿ ಸಭೆ ನಡೆಸಿ, ಜನನ ಮರಣ ನೋಂದಣಿ ಪರಿಶೀಲನೆ ನಡೆಸುವಂತೆ ಅವರು, ತಿಳಿಸಿದರು. ಈ ಕುರಿತಂತೆ ಸಾರ್ವಜನಿಕರಿಗೆ ಸ್ವಚ್ಛ ವಾಹಿನಿ ವಾಹನಗಳ ಮೂಲಕ ಜಿಲ್ಲೆಯಾದ್ಯಂತ ನಿರಂತರವಾಗಿ ಪ್ರಚಾರ ಮಾಡುವಂತೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

<><><>

ಉಡುಪಿ ಜಿಲ್ಲೆಯ ರೈತ ಕರೆ ಕೇಂದ್ರದಲ್ಲಿ ಕರೆಗಳನ್ನು ಸ್ವೀಕರಿಸಲು ಹಾಗೂ ಸಕಾಲದಲ್ಲಿ ಸೇವೆಗಳನ್ನು ಒದಗಿಸಲು ಟೋಲ್ ಫ್ರೀ ಸಂಖ್ಯೆಯ ಜೊತೆಗೆ ವ್ಯಾನಿಟಿ ಸಂಖ್ಯೆಯಾದ ೮೨೭೭೦೦೩೫೫೩ ಅನ್ನು ಸಕ್ರಿಯಗೊಳಿಸಲಾಗಿದೆ. ರೈತರಿಗೆ ಬೆಳೆ ಸಮೀಕ್ಷೆ, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ, ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ, ಹವಾಮಾನ ಮಾಹಿತಿ ಹಾಗೂ ಕೃಷಿ ಇಲಾಖೆಯ ಇತರೆ ಯೋಜನೆಗಳು ಮತ್ತು ತಾಂತ್ರಿಕ ಸಂಬಂಧಿತ ಮಾಹಿತಿಗಳನ್ನು ಟೋಲ್ ಫ್ರೀ ಸಂಖ್ಯೆಯಾದ ೧೮೦೦-೪೨೫-೩೫೫೩ ಅನ್ನು ಬಳಸಿ ಒದಗಿಸಲಾಗುತ್ತಿದೆ. ಕರೆ ಕೇಂದ್ರದಲ್ಲಿ ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

<><><>

ಗುವಾಹಟಿಯಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ್ ರಾಯಲ್ಸ್ ತಂಡಗಳು ಸೆಣಸಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>